**Akashvani : Bangalore**
**National Bulletin In Kannada**
**22.05.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ಆರನೇ ಹಂತದ ಲೋಕಸಭಾ ಚುನಾವಣೆಗೆ ರಂಗೇರಿದ ಕಣ; ವಿವಿಧ ಪಕ್ಷಗಳಿಂದ ಬಿರುಸಿನ ಪ್ರಚಾರ

೨. ಇಂದು ದೆಹಲಿಯಲ್ಲಿ ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತಯಾಚನೆ

೩. ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಇರಾನ್‌ಗೆ ಭೇಟಿ; ಅಧ್ಯಕ್ಷ ಡಾ. ಸೆಯ್ಯದ್ ಇಬ್ರಾಹಿಂ ರೈಸಿ, ಅವರ ಸಂತಾಪ ಸೂಚಕ ಕಾರ್ಯಕ್ರಮದಲ್ಲಿ ಭಾಗಿ

೪. ಐಪಿಎಲ್ ಕ್ರಿಕೆಟ್; ಫೈನಲ್ಸ್ ಪ್ರವೇಶಿಸಿದ ಕೊಲ್ಕತ್ತಾ ನೈಟ್ ರೈಡರ್ಸ್ ತಂಡ

**<><*<><>*><>**

ಪ್ರಧಾನಿ ಹಾಗೂ ಬಿಜೆಪಿಯ ಹಿರಿಯ ನಾಯಕ ನರೇಂದ್ರ ಮೋದಿ ಉತ್ತರಪ್ರದೇಶದ ನಿನ್ನೆ ಚುನಾವಣಾ ಪ್ರಚಾರ ನಡೆಸಿದರು. ವಾರಾಣಸಿಯ ಸಂಪೂರ್ಣಾನಂದ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ ನಡೆದ ಮಾತೃಶಕ್ತಿ ಸಮ್ಮೇಳನದಲ್ಲಿ, ಗೃಹಿಣಿಯರು, ಮಹಿಳಾ ವೈದ್ಯರು, ಶಿಕ್ಷಕರು, ವ್ಯಾಪಾರ ಮಾಲೀಕರು, ವಕೀಲರು ಮತ್ತು ಕ್ರೀಡಾಪಟುಗಳೊಂದಿಗೆ ಪ್ರಧಾನಿ ನೇರ ಸಂವಾದ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಐ.ಎನ್.ಡಿ.ಐ. ಮೈತ್ರಿಕೂಟ ಮಹಿಳಾ ವಿರೋಧಿಯಾಗಿದ್ದು, ಸಮಾಜವಾದಿ ಪಕ್ಷ ಮತ್ತು ಕಾಂಗ್ರೆಸ್ ಆಡಳಿತದಲ್ಲಿ ಮಹಿಳೆಯರು ಸುರಕ್ಷಿತವಾಗಿರಲಿಲ್ಲ ಎಂದರು. ಈಗ ರಾಜ್ಯದಲ್ಲಿರುವ ಬಿಜೆಪಿ ಸರ್ಕಾರದಲ್ಲಿ ಮಹಿಳೆಯರು ಹೆಚ್ಚು ಸುರಕ್ಷಿತವಾಗಿದ್ದಾರೆ. ಈಗ ಮಹಿಳಾ ಕೇಂದ್ರೀಕೃತ ನೀತಿಗಳನ್ನು ರೂಪಿಸುವ ಜೊತೆಗೆ ಅವರಿಗೆ ಮೀಸಲಾತಿಯನ್ನು ನೀಡಲಾಗಿದೆ ಎಂದು ಪ್ರಧಾನಿ ಹೇಳಿದರು. ಇದಕ್ಕೂ ಮೊದಲು ಪ್ರಯಾಗರಾಜ್‌ನಲ್ಲಿ ರಾಜಕೀಯ ಸಭೆಯನ್ನುದ್ದೇಶಿಸಿ ಮಾತನಾಡಿದ ನರೇಂದ್ರ ಮೋದಿ, ಬಿಎಸ್‌ಪಿ ಮತ್ತು ಸಮಾಜವಾದಿ ಪಕ್ಷದ ವಿರುದ್ಧ ವಾಗ್ದಾಳಿ ನಡೆಸಿದರು.

ಹಿಂದಿನ ಆಡಳಿತದಲ್ಲಿ ಮಾಫಿಯಾಗೆ ಮುಕ್ತ ಹಸ್ತ ನೀಡಿ, ಬಡವರು ಮತ್ತು ದೀನದಲಿತರ ಭೂಮಿಯನ್ನು ಕಸಿದುಕೊಳ್ಳಲಾಗುತ್ತಿತ್ತು, ಆದರೆ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಅಂತಹ ಚಟುವಟಿಕೆಗಳಲಿಗೆ ಅವಕಾಶ ಕಲ್ಪಿಸಲಾಗಿಲ್ಲ ಎಂದು ಪ್ರಧಾನಿ ಹೇಳಿದರು. ಮತ್ತೊಂದೆಡೆ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಬಲರಾಂಪುರ, ಸಿದ್ಧಾರ್ಥ್ ನಗರ, ಸಂತ ಕಬೀರ್ ನಗರ ಬಸ್ತಿ ಮತ್ತು ಅಜಂಗಢ ಜಿಲ್ಲೆಗಳಲ್ಲಿ ನಿನ್ನೆ ರ್‍ಯಾಲಿಗಳನ್ನುದ್ದೇಶಿಸಿ ಮಾತನಾಡಿದರು. ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಭದೋಹಿಯಲ್ಲಿ ಟಿಎಂಸಿ ಅಭ್ಯರ್ಥಿ ಪರವಾಗಿ ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಿದರು.

<><*<><>*><>

ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ, ಪಶ್ಚಿಮ ಬಂಗಾಳದ ಕಂಠಿ ಲೋಕಸಭಾ ಕ್ಷೇತ್ರದಲ್ಲಿಂದು ಚುನಾವಣಾ ಪ್ರಚಾರ ನಡೆಸಲಿದ್ದು, ಘಾತಲ್, ಪುರುಲಿಯಾ ಮತ್ತು ಬಾಂಕುರಾದಲ್ಲಿ ನಡೆಯುವ ಸಾರ್ವಜನಿಕ ಸಭೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಉತ್ತರ ಕೋಲ್ಕತ್ತಾ ಮತ್ತು ದಕ್ಷಿಣ ಕೋಲ್ಕತ್ತಾ ಲೋಕಸಭಾ ಕ್ಷೇತರ್ರಗಳಲ್ಲಿ ಸಾರ್ವಜನಿಕ ಸಭೆಗಳಲ್ಲಿ ಭಾಗವಹಿಸಲಿದ್ದು, ನಂತರ ಬಾರಸಾತ್ ಲೋಕಸಭಾ ಕ್ಷೇತ್ರದಲ್ಲಿ ರೋಡ್ ಶೊ ನಡೆಸಲಿದ್ದಾರೆ.

<><*<><>*><>

ರಾಷ್ಟ್ರ ರಾಜಧಾನಿ ದೆಹಲಿಯ ಎಲ್ಲಾ ೭ ಲೋಕಸಭಾ ಕ್ಷೇತ್ರಗಳಿಗೆ ಇದೇ ೨೫ ರಂದು ಮತದಾನ ನಡೆಯಲಿದ್ದು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಅಬ್ಬರದ ಚುನಾವಣಾ ಪ್ರಚಾರ ನಡೆಸುತ್ತಿದ್ದಾರೆ. ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಪಕ್ಷದ ಅಭ್ಯರ್ಥಿ ಪರವಾಗಿ ಗುಜರಾತ್‌ನ ದ್ವಾರಕಾದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ದೆಹಲಿಯ ಭಾಲ್ಸ್ವಾ ಡೈರಿಯಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಳ್ಳಲಿದ್ದು, ಪಕ್ಷದ ಅಭ್ಯರ್ಥಿ ಪರವಾಗಿ ಮತಯಾಚಿಸಲಿದ್ದಾರೆ.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರಿಂದು ಇರಾನ್‌ಗೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ವೇಳೆ ಅವರು, ಕಳೆದ ಮೇ ೧೯ ರಂದು ಹೆಲಿಕಾಪ್ಟರ್ ಅಪಘಾತದಲ್ಲಿ ಇರಾನ್ ಅಧ್ಯಕ್ಷ ಡಾ. ಸೆಯ್ಯದ್ ಇಬ್ರಾಹಿಂ ರೈಸಿ, ವಿದೇಶಾಂಗ ಸಚಿವ ಡಾ.

ಹೊಸೈನ್ ಅಮೀರ್-ಅಬ್ದೊಲ್ಲಾಹಿಯಾನ್ ಮತ್ತು ಇತರ ಇರಾನ್ ಅಧಿಕಾರಿಗಳ ದುರಂತ ನಿಧನಕ್ಕೆ ಸಂತಾಪ ಸೂಚಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಇರಾನ್ ಸರ್ಕಾರ ಮತ್ತು ಜನತೆಗೆ ಸಂತಾಪ ಸೂಚಿಸಿದ್ದು, ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ನಿನ್ನೆ ನವದೆಹಲಿಯಲ್ಲಿರುವ ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್‌ನ ರಾಯಭಾರ ಕಚೇರಿಗೆ ಭೇಟಿ ನೀಡಿ ದುರಂತದ ಕುರಿತು ಸಂತಾಪ ಸೂಚಿಸಿದರು. ಭಾರತದಲ್ಲಿ ನಿನ್ನೆ ಒಂದು ದಿನದ ಶೋಕಾಚರಣೆ ಆಚರಿಸಲಾಯಿತು.

<><*<><>*><>

ಅಕ್ರಮ ಹಣ ವರ್ಗಾವಣೆ ತಡೆ ಕಾನೂನನ್ನು ಪ್ರತಿಪಕ್ಷಗಳ ವಿರುದ್ಧ ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ ಎಂದು ಆಮ್ ಆದ್ಮಿ ಪಕ್ಷದ ಹಿರಿಯ ಮುಖಂಡೆ ಅತಿಶಿ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದೆಹಲಿಯಲ್ಲಿ ನಡೆದಿದೆ ಎನ್ನಲಾದ ಮದ್ಯ ಹಗರಣ ಆಮ್ ಆದ್ಮಿ ಪಕ್ಷವನ್ನು ಒಡೆಯುವ ಬಿಜೆಪಿಯ ಪಿತೂರಿಯಾಗಿದೆ ಎಂದು ಹೇಳಿದ್ದಾರೆ. ಆಪ್ ಹಿರಿಯ ನಾಯಕ ಮನೀಶ್ ಸಿಸೋಡಿಯಾ ಜಾಮೀನು ಅರ್ಜಿಯನ್ನು ದೆಹಲಿ ಉಚ್ಚ ನ್ಯಾಯಾಲಯ ತಿರಸ್ಕರಿಸಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಬಿಜೆಪಿ ಸರ್ಕಾರ ರಾಜಕೀಯ ದುರುದ್ದೇಶಗಳಿಗೆ ಕೇಂದ್ರ ತನಿಖಾ ಸಂಸ್ಥೆಗಳನ್ನು ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದರು.

<><*<><>*><>

ಇರಾನ್‌ನಲ್ಲಿ ಜೂನ್ ೨೮ ರಂದು ಅಧ್ಯಕ್ಷೀಯ ಚುನಾವಣೆ ಜರುಗಲಿದೆ. ಇರಾನ್ ಹಂಗಾಮಿ ಅಧ್ಯಕ್ಷ ಮೊಹಮ್ಮದ್ ಮೊಕ್ಬರ್, ನ್ಯಾಯಾಂಗ ಮುಖ್ಯಸ್ಥ, ಸಂಸತ್ ಸ್ಪೀಕರ್ ಸೇರಿದಂತೆ ಸಂಪುಟ ಸಚಿವರು ಮತ್ತು ಉನ್ನತ ಅಧಿಕಾರಿಗಳು ಭಾಗವಹಿಸಿದ್ದ ಸಂಭೆಯಲ್ಲಿ ಚುನಾವಣಾ ದಿನಾಂಕವನ್ನು ಘೋಷಿಸಲಾಯಿತು. ಹೆಲಿಕಾಪ್ಟರ್ ದುರಂತದಲ್ಲಿ ಇರಾನ್ ಅಧ್ಯಕ್ಷ ಡಾ.ಸೈಯ್ಯದ್ ಇಬ್ರಾಹಿಂ ರೈಸಿ ಅವರ ನಿಧನದ ಹಿನ್ನೆಲೆಯಲ್ಲಿ ಇರಾನ್ ಉಪಾಧ್ಯಕ್ಷರಾಗಿದ್ದ ಮೊಹಮ್ಮದ್ ಮೊಕ್ಬರ್ ಅವರನ್ನು ಹಂಗಾಮಿ ಅಧ್ಯಕ್ಷರಾಗಿ, ಇರಾನ್‌ನ ಸರ್ವೋಚ್ಛ ನಾಯಕ ಅಯತೊಲ್ಲಾ ಅಲಿ ಖಮೇನಿ ನೇಮಿಸಿದರು. ಇದೇ ವೇಳೆ, ಹೆಲಿಕಾಪ್ಟರ್ ದುರಂತದಲ್ಲಿ ಇರಾನ್ ಅಧ್ಯಕ್ಷ ಇಬ್ರಾಹಿಂ ರಾಸಿ, ವಿದೇಶಾಂಗ ವ್ಯವಹಾರಗಳ ಸಚಿವ ಅಮೀರ್ ಅಬ್ದೋಲ್ಲಾಹಿಯಾನ್ ಸೇರಿದಂತೆ ಏಳು ಅಧಿಕಾರಿಗಳು ಮೃತಪಟ್ಟ ಪ್ರಕರಣದ ತನಿಖೆಯನ್ನು ಇರಾನ್‌ನ ಸಶಸ್ತ್ರ ಪಡೆಗಳ ಮುಖ್ಯಸ್ಥ ಮೇಜರ್ ಜನರಲ್ ಮೊಹಮ್ಮದ್ ಬಘೇರಿ ನೇತೃತ್ವದ ಉನ್ನತಮಟ್ಟದ ನಿಯೋಗಕ್ಕೆ ವಹಿಸಲಾಗಿದೆ.

<><*<><>*><>

ಲಂಡನ್‌ನಿಂದ ಸಿಂಗಾಪುರಕ್ಕೆ ಹೊರಟ್ಟಿದ ಸಿಂಗಾಪುರ ಏರ್‌ಲೈನ್ಸ್ ವಿಮಾನವು ಪ್ರಕ್ಷುಬ್ಧ ಪರಿಸ್ಥಿತಿಯ ಕಾರಣ ಬ್ಯಾಂಕಾಕ್‌ನಲ್ಲಿ ನಿನ್ನೆ ತುರ್ತು ಭೂಸ್ಪರ್ಶ ಮಾಡಿತು. ಘಟನೆಯಲ್ಲಿ ಒಬ್ಬ ವ್ಯಕ್ತಿ ಮೃತಪಟ್ಟಿದ್ದು, ಅನೇಕರು ಗಾಯಗೊಂಡಿದ್ದಾರೆ. ವಿಮಾನದಲ್ಲಿ ಒಟ್ಟು ೨೧೧ ಪ್ರಯಾಣಿಕರು ಮತ್ತು ೧೮ ವಿಮಾನ ಸಿಬ್ಬಂದಿ ಪ್ರಯಾಣಿಸುತ್ತಿದ್ದರು. ಘಟನೆಯ ಕಾರಣ ಕುರಿತು ತನಿಖೆ ಪ್ರಗತಿಯಲ್ಲಿದೆ ಎಂದು ಸಿಂಗಾಪುರ ಏರ್‌ಲೈನ್ಸ್ ಮಾಹಿತಿ ನೀಡಿದೆ.

<><*<><>*><>

ಬೆಂಗಳೂರಿನ ರಾಮೇಶ್ವರ್ ಕೆಫೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ದಳದ ಅಧಿಕಾರಿಗಳು ನಿನ್ನೆ ಕರ್ನಾಟಕ, ತಮಿಳುನಾಡು, ತೆಲಂಗಾಣ ಮತ್ತು ಆಂಧ್ರಪ್ರದೇಶದ ಹನ್ನೊಂದು ಸ್ಥಳಗಳಲ್ಲಿ ಶೋಧಕಾರ್ಯ ನಡೆಸಿದ್ದಾರೆ. ಪ್ರಕರಣದ ಹನ್ನೊಂದು ಆರೋಪಿಗಳಿಗೆ ಸಂಬಂಧಿಸಿದ ಸ್ಥಳಗಳಿಂದ ಡಿಜಿಟಲ್ ಉಪಕರಣಗಳು ಸೇರಿದಂತೆ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ತನಿಖಾ ಸಂಸ್ಥೆ ನೀಡಿದ ಮಾಹಿತಿ ಪ್ರಕಾರ ಮೊಸಾವಿರ್ ಹುಸೇನ್ ಶಾಜೀಬ್ ಮತ್ತು ಅಬ್ದುಲ್ ಮತೀನ್ ತಾಹಾ ಎಂಬ ಇಬ್ಬರನ್ನು ಈ ಪ್ರಕಣಕ್ಕೆ ಸಂಬಂಧಿಸಿದಂತೆ ಬಂಧಿಸಲಾಗಿದೆ.

<><*<><>*><>

ಐಪಿಎಲ್ ಕ್ರಿಕೆಟ್ ಟೂರ್ನಿಯ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ೮ ವಿಕೆಟ್ ಜಯ ದಾಖಲಿಸಿದೆ. ಈ ಮೂಲಕ ಕೋಲ್ಕತ್ತಾ ಫೈನಲ್‌ಗೆ ಪ್ರವೇಶ ಪಡೆದಿದೆ. ಸನ್ ರೈಸರ್ಸ ಹೈದರಾಬಾದ್ ೧೬೦ ರನ್ ಗೆಲುವಿನ ಗುರಿ ಬೆನ್ನತ್ತಿದ ಕೊಲ್ಕತ್ತಾ ತಂಡ ೧೩.೪ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೬೪ ರನ್ ಗಳಿಸಿ ಗೆಲುವಿನ ನಗೆ ಬೀರಿತು. ನಾಯಕ ಶ್ರೇಯಸ್ ಅಯ್ಯರ್‌ನ ೫೮ ಹಾಗೂ ವೆಂಕಟೇಶ್ ಅಯ್ಯರ್‌ನ ೫೧ ರನ್ ತಂಡದ ಗೆಲುವನ್ನು ಸುಗಮಗೊಳಿಸಿತು. ಇದಕ್ಕೂ ಮುನ್ನ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಸನ್ ರೈಸರ್ಸ್ ಹೈದರಾಬಾದ್ ೧೯.೩ ಓವರ್‌ಗಳಲ್ಲಿ ೧೫೯ ರನ್ ಗಳಿಸಿ, ಸರ್ವ ಪತನಗೊಂಡಿತು. ಇಂದು ನಡೆಯಲಿರುವ ಎಲಿಮಿನೇಟರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಆರಂಭವಾಗಲಿದೆ. ಈ ಪಂದ್ಯದಲ್ಲಿ ಗೆದ್ದ ತಂಡ ಫೈನಲ್ಸ್ ಪ್ರವೇಶಿಸಲು ಒಂದನೇ ಕ್ವಾಲಿಫೈಯರ್ ಪಂದ್ಯದಲ್ಲಿ ಸೋತ ಹೈದಾರಬಾದ್ ತಂಡದೊಂದಿಗೆ ಸೆಣಸಾಟ ನಡೆಸಲಿದೆ. ಫೈನಲ್ ಪಂದ್ಯ ಇದೇ ೨೬ ಭಾನುವಾರದಂದು ನಡೆಯಲಿದೆ.

<><*<><>*><>

ಥಾಯ್ಲೆಂಡ್ ಓಪನ್ ಸೂಪರ್-೫೦೦ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಗೆಲ್ಲುವ ಮೂಲಕ ವಿಶ್ವ ಬ್ಯಾಡ್ಮಿಂಟನ್ ಫೆಡರೇಶನ್ ರ‍್ಯಾಂಕಿಂಗ್‌ನಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಮೊದಲನೇ ಸ್ಥಾನಕ್ಕೆ ಏರಿದೆ. ಈ ಪಂದ್ಯಾವಳಿಗೂ ಮೊದಲು ಈ ಜೋಡಿಯು ಮೂರನೇ ಸ್ಥಾನದಲ್ಲಿತ್ತು. ಇದೀಗ ಚೀನಾದ ಲಿಯಾಂಗ್ ವೀ ಕೆಂಗ್ ಮತ್ತು ವಾಂಗ್ ಚಾಂಗ್ ಜೋಡಿಯನ್ನು ಹಿಂದಿಕ್ಕಿ ಈ ಸಾಧನೆ ಮಾಡಿದೆ.

<><*<><>*><>

ಏಷ್ಯನ್ ರಿಲೇ ಚಾಂಪಿಯನ್‌ಶಿಪ್ ೨೦೨೪ ರಲ್ಲಿ, ಭಾರತೀಯ ಪುರುಷರ ಮತ್ತು ಮಹಿಳೆಯರ ೪x೪೦೦ ಮೀಟರ್ ರಿಲೇ ತಂಡಗಳು ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ಎರಡು ಬೆಳ್ಳಿ ಪದಕಗಳನ್ನು ಗೆದ್ದುಕೊಂಡಿವೆ. ಮುಹಮ್ಮದ್ ಅನಾಸ್ ಯಾಹಿಯಾ, ಟಿ ಸಂತೋಷ್ ಕುಮಾರ್, ಮಿಜೋ ಚಾಕೊ ಕುರಿಯನ್ ಮತ್ತು ರಾಜೀವ್ ಅರೋಕಿಯಾ  ಪುರುಷರ ರಿಲೇ ತಂಡ, ಶ್ರೀಲಂಕಾ ತಂಡದ ವಿರುದ್ಧ ಗೆಲುವು ಸಾಧಿಸಿ ಬೆಳ್ಳಿ ಪದಕ ಪಡೆದುಕೊಂಡಿದೆ. ಈ ನಡುವೆ ವಿಯೆಟ್ನಾಂ ಕಂಚಿನ ಪದಕ ಗೆದ್ದುಕೊಂಡಿದೆ. ಮಹಿಳೆಯರ ವಿಭಾಗದಲ್ಲಿ ಭಾರತದ ವಿತ್ಯಾ ರಾಮರಾಜ್, ಎಂ.ಆರ್.ಪೂವಮ್ಮ, ರೂಪಲ್ ಮತ್ತು ಪ್ರಾಚಿ ಚೌಧರಿ, ಎರಡನೇ ಸ್ಥಾನದೊಂದಿಗೆ ಬೆಳ್ಳಿ ಪದಕವನ್ನು ಪಡೆದರು. ಜಪಾನ್ ಕಂಚಿನ ಪದಕ ತನ್ನದಾಗಿಸಿಕೊಂಡಿತು. ಈ ತಿಂಗಳ ಆರಂಭದಲ್ಲಿ ಬಹಾಮಾಸ್‌ನಲ್ಲಿ ನಡೆದ ವರ್ಲ್ಡ್ ರಿಲೇಸ್ ೨೦೨೪ ರಲ್ಲಿ ಭಾರತೀಯ ಪುರುಷರ ಮತ್ತು ಮಹಿಳಾ ರಿಲೇ ತಂಡಗಳು ಮುಂಬರುವ ಪ್ಯಾರಿಸ್ ಒಲಿಂಪಿಕ್ಸ್‌ಗೆ ಈಗಾಗಲೇ ಅರ್ಹತೆ ಪಡೆದಿವೆ.

<><*<><>*><>

ಎಫ್‌ಐಎಚ್ ಪ್ರೊ ಹಾಕಿ ಲೀಗ್‌ನಲ್ಲಿ ಭಾರತೀಯ ಪುರುಷ ಮತ್ತು ಮಹಿಳಾ ಹಾಕಿ ತಂಡ ಇಂದು ಬೆಲ್ಜಿಯಂನ ಆಂಟ್‌ವರ್ಪ್‌ನಲ್ಲಿ ಆಟ ಆರಂಭಿಸಲಿವೆ. ಪುರುಷರ ಮತ್ತು ಮಹಿಳೆಯರ ಎರಡೂ ತಂಡಗಳು ಇಂದು ಸಂಜೆ ಅರ್ಜೆಂಟೀನಾ ವಿರುದ್ಧ ಆಡಲಿವೆ. ಸಲೀಮಾ ಟೆಟೆ ನೇತೃತ್ವದ ವುಮೆನ್ ಇನ್ ಬ್ಲೂ ತಂಡವು ಭಾರತೀಯ ಕಾಲಮಾನ ಮಧ್ಯಾಹ್ನ ೩.೪೫ ಕ್ಕೆ ಅರ್ಜೆಂಟೀನಾದ ಮಹಿಳಾ ತಂಡವನ್ನು ಎದುರಿಸಲಿದೆ. ಹರ್ಮನ್‌ಪ್ರೀತ್ ಸಿಂಗ್ ನೇತೃತ್ವದ ಪುರುಷರ ತಂಡವು ೭ ಗಂಟೆಗೆ ಕಣಕ್ಕಿಳಿಯಲಿದ್ದಾರೆ.

ಪ್ರಸ್ತುತ, ಭಾರತೀಯ ಪುರುಷರ ತಂಡವು ಎಂಟು ಪಂದ್ಯಗಳಿಂದ ೧೫ ಅಂಕಗಳೊಂದಿಗೆ ಪ್ರೊ ಲೀಗ್ ಪಾಯಿಂಟ್ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದೆ. ಮಹಿಳಾ ತಂಡ ಎಂಟು ಪಂದ್ಯಗಳಿಂದ ಎಂಟು ಅಂಕಗಳೊಂದಿಗೆ ಆರನೇ ಸ್ಥಾನದಲ್ಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**